# ಹಾಸ್ಟೆಲ್ ದುಸ್ಥಿತಿ: ಮರುಗಿದ ಸದನ

ವಿಧಾನಸಭೆ: ರಾಜ್ಯದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಹಾಸ್ಟೆಲ್ ಸಂಖ್ಯೆಯನ್ನು ಹೆಚ್ಚಿಸಬೇಕು ಎಂದು ಪ್ರಿಯಾಂಕ ಖರ್ಗೆ ಹಾಗೂ ಇತರ ಸದಸ್ಯರು ಒಕ್ಕೊರಲಿನಿಂದ ಒತ್ತಾಯಿಸಿದ ಘಟನೆ ಸೋಮವಾರ ಸದನದಲ್ಲಿ ನಡೆಯಿತು. ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಹಾಸ್ಟೆಲ್‌ಗಳ ದುಸ್ಥಿತಿಗೆ ಇಡೀ ಸದನ ಮಮ್ಮಲ ಮರುಗಿತು.

ಎಂ.ಶ್ರೀನಿವಾಸ ಅವರು ಕೇಳಿದ ಮೂಲ ಪ್ರಶ್ನೆಯ ಮೇಲೆ ನಡೆದ ಚರ್ಚೆಯ ಸಂದರ್ಭ ಈ ಒತ್ತಾಯ ಕೇಳಿ ಬಂತು. ರೇಣುಕಾ ಚಿದಂಬರಂ ಸಮಿತಿಯ ಸಲಹೆಗಳನ್ನು ಜಾರಿಗೆ ತಂದು ಹಿಂದುಳಿದ ವರ್ಗಗಳ ಹಾಸ್ಟೆಲ್ ಸುಧಾರಿಸಬೇಕು ಎಂದು ಪ್ರಿಯಾಂಕ ಖರ್ಗೆ ಸಲಹೆ ಮಾಡಿದರು. ಅಮರೇಗೌಡ ಹಾಗೂ

ಖಾಸಗಿಯವರ ಕಟ್ಟಡದಲ್ಲೇ ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳು ನಡೆಯಬೇಕು ಎನ್ನುವುದೇ ಒಂದು ಲಾಬಿ ಇದೆ. ಆದ್ದರಿಂದ ಜಿಲ್ಲಾಧಿಕಾರಿಗಳನ್ನು ಜವಾಬ್ದಾರಿಯನ್ನಾಗಿ ಮಾಡಿ ಸ್ವಂತ ಕಟ್ಟಡಕ್ಕೆ ಸ್ಥಳವನ್ನು ಹುಡುಕಿಸಿಕೊಳ್ಳಬೇಕು ಎಂದು ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಸಚಿವ ಕೋಟ ಶ್ರೀನಿವಾಸ ಪೂಜಾರಿಯವರಿಗೆ ಸಲಹೆ ಮಾಡಿದರು.

'ಸಾವಿರಕ್ಕೂ ಹೆಚ್ಚು ಹಾಸ್ಟೆಲ್‌ಗಳು ಖಾಸಗಿ ಕಟ್ಟಡದಲ್ಲಿ ಇರುವುದು ಒಳ್ಳೆಯದಲ್ಲ. ನೀವು ಅಧಿಕಾರಿಗಳ ಮೇಲೆ ಒತ್ತಡ ತಂದು ಸ್ವಂತ ಜಾಗವನ್ನು ಮಾಡಿಕೊಳ್ಳದೇ ಇದ್ದರೆ ಖಾಸಗಿ ಪರ ಲಾಬಿಯವರು ನಿಮಗೆ ಜಾಗವಿಲ್ಲ ಎಂಬುದನ್ನು ಹೇಳುತ್ತಲೇ ಹೋಗುತ್ತವೆ. ಬಡ ಹಿಂದುಳಿದ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಲೇ ಇರುತ್ತದೆ' ಎಂದು ಅವಲೋಕಿಸಿದರು.

ಇತರರೂ ಧ್ವನಿಗೂಡಿಸಿದರು. ಶಿವಲಿಂಗೇಗೌಡ ಅವರು ಹಿಂದುಳಿದ ಹಾಸ್ಟೆಲ್‌ಗಳ ದುಸ್ಥಿತಿಯನ್ನು ಸದನಕ್ಕೆ ವಿವರಿಸಿದರು. ವೈಜ್ಞಾನಿಕವಾದ ರೀತಿಯಲ್ಲಿ ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳನ್ನು ನಿರ್ವಹಿಸಬೇಕು ಎಂದು ಸದಸ್ಯರು ಒತ್ತಾಯಿಸಿದರು.

ಉತ್ತರಿಸಿದ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಕೋಟ ಶ್ರೀನಿವಾಸ ಪೂಜಾರಿ ಮೂಲಸೌಕರ್ಯಗಳ ಕೊರತೆ ಕಾಡುತ್ತಿರುವುದು ನಿಜವಾಗಿದ್ದು, ಇದಕ್ಕಾಗಿ ಎಲ್ಲ ಪಕ್ಷಗಳ ಶಾಸಕರ ಸಭೆಯನ್ನು ಕರೆದು ಸಮಸ್ಯೆಗಳನ್ನು ಪರಿಹರಿಸಲಾಗುವುದು. ಸಾವಿರಕ್ಕೂ ಹೆಚ್ಚು ಹಾಸ್ಟೆಲ್‌ಗಳು ಬಾಡಿಗೆ ಕಟ್ಟಡದಲ್ಲಿದ್ದು, ಮೊದಲು ಇವುಗಳಿಗೆ ಸ್ವಂತ ಕಟ್ಟಡವನ್ನು ಇಲಾಖೆ ಹೊಂದಬೇಕಾಗಿದೆ. ಶಾಸಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸಮಸ್ಯೆಯನ್ನು ಪರಿಹರಿಸಲಾಗುವುದು ಎಂದರು.